# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಜಗದೀಶ್, ಕಾರ್ಯದರ್ಶಿ, ಊರುಕೆರೆ, ಗ್ರಾಮಪಂಚಾಯತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:** ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ **D.O.No.Compt/BD/1146/2016/ARLO-2,ದಿ: 20.07.2017.**

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:11.07.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀಮತಿ ಗಂಗಮ್ಮ, ಜನತಾ ಕಾಲೋನಿ, ಊರುಕೆರೆ ಗ್ರಾಮ, ತುಮಕೂರು ತಾಲ್ಲೂಕು (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ ರಾಮಾಂಜನೇಯ, ಕಾರ್ಯನಿರ್ವಾಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ತುಮಕೂರು ತಾಲ್ಲೂಕು, (2) ಶ್ರೀ.ಜಗದೀಶ್, ಕಾರ್ಯದರ್ಶಿ, ಊರುಕೆರೆ, ಗ್ರಾಮಪಂಚಾಯತಿ, ತುಮಕೂರು ತಾಲ್ಲೂಕು (ಇನ್ನು ಮುಂದೆ 1 ಮತ್ತು 2ನೇ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

**ದೂರಿನ ಸಂಕ್ಷಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ತುಮಕೂರು ತಾಲ್ಲೂಕು ಊರುಕೆರೆ ಗ್ರಾಮದ ದೂರುದಾರರ ಗಂಡ ಅಶ್ವತ್ಥ ಅವರಿಗೆ ಖಾತೆ ನಂ.2051 ಸಂಖ್ಯೆ: 11ರ ಮನೆಯು ಪಂಚಾಯಿತಿಯಿಂದ ಮಂಜೂರಾಗಿದ್ದು, ಅವರು ತೀರಿಕೊಂಡ ನಂತರ ದೂರುದಾರರ ಹೆಸರಿನಲ್ಲಿ ಪೌತಿ ಖಾತೆ ಮಾಡಿರುತ್ತಾರೆ. ಆದರೆ ಇದೇ ಗ್ರಾಮದ ರೌಡಿ ಓ.ಸಿ.ಕೃಷ್ಣಪ್ಪನ ತಂಗಿ ರಾಜಮ್ಮನಿಗೆ ಖಾತೆ ನಂ.341 ಮಾಡಿದ್ದು, ಅವರು ದೂರುದಾರರಿಗೆ ತುಂಬಾ ತೊಂದರೆ ಕೊಡುತ್ತಿದ್ದಾರೆ. ಎದುರುದಾರರು ಅವರೊಂದಿಗೆ ಷಾಮೀಲಾಗಿ ದೂರುದಾರರ ಹೆಸರಿನಲ್ಲಿರುವ ಖಾತೆಯನ್ನು ರದ್ದುಗೊಳಿಸಿರುತ್ತಾರೆ. ಆದ್ದರಿಂದ ಈ ಬಗ್ಗೆ ಪರಿಶೀಲಿಸಿ ತನಗೆ ನ್ಯಾಯ ದೊರಕಿಸಬೇಕೆಂದು ಕೋರಿ ದೂರು ಸಲ್ಲಿಸಿರುತ್ತಾರೆ.

1 ಮತ್ತು 2ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರು ಅಶ್ವತ್ಥಪ್ಪ ಅವರ ಹೆಂಡತಿ ಎನ್ನುವ ಬಗ್ಗೆ ಹಾಗೂ ಊರುಕೆರೆ ಗ್ರಾಮದ ವಾಸಿ ಎನ್ನುವ ಬಗ್ಗೆ ಯಾವುದೇ ದಾಖಲೆ ಸಲ್ಲಿಸಿರುವುದಿಲ್ಲ. ಅಶ್ವಥ ಅವರಿಗೆ 30.04.1987 ರಂದು ಮನೆ ಮಂಜೂರಾಗಿದ್ದು, 2 ವರ್ಷದೊಳಗೆ ಮನೆ ಕಟ್ಟಿಕೊಂಡು ವಾಸ ಮಾಡಬೇಕಾಗಿತ್ತು, ಆದರೆ ಅವರು ಮನೆ ಕಟ್ಟಿರುವುದಿಲ್ಲ. ಅಲ್ಲದೆ ದೂರುದಾರರು ಈ ಮಧ್ಯೆ ಸಿವಿಲ್ ನ್ಯಾಯಾಲಯಕ್ಕೆ ಹೋಗಿದ್ದಾರೆಂದು ತಿಳಿದುಬಂದಿರುತ್ತದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನ ಅಂಶಗಳನ್ನು ಪುನರುಚ್ಚರಿಸಿರುತ್ತಾರೆ.

ದೂರುದಾರರು ಸಲ್ಲಿಸಿದ ದೂರು ಆಕ್ಷೇಪಣೆ, ಪ್ರತ್ಯುತ್ತರ ಮತ್ತು ದಾಖಲೆಗಳನ್ನು ಪರಿಶೀಲಿಸಿದಾಗ, ದೂರುದಾರರ ಹೆಸರಿನಲ್ಲಿರುವ ಖಾತೆ ರದ್ದುಗೊಂಡ ನಂತರ ಅವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,ಜಿಲ್ಲಾ ಪಂಚಾಯತ್, ತುಮಕೂರು, ಅವರಿಗೆ ಅರ್ಜಿ ಸಲ್ಲಿಸಿದ್ದು, ಅವರು ಈ ಬಗ್ಗೆ ಪರಿಶೀಲಿಸಿ ದಿನಾಂಕ: 13.07.2017 ರಂದು ದೂರುದಾರರ

ನಿವೇಶನವು ಕಾನೂನುಬದ್ಧವಾಗಿದ್ದು, ಅವರಿಗೆ ಚೆಕ್ಕುಬಂದು ಗುರ್ತಿಸಿ ಹಕ್ಕುಪತ್ರದಲ್ಲಿರುವ ಅಳತೆಯಂತೆ ಅತಿಕ್ರಮಣವನ್ನು ತೆರವುಗೊಳಿಸಿ 1 ವಾರದೊಳಗೆ ವರದಿ ನೀಡುವಂತೆ ತಪ್ಪಿದಲ್ಲಿ ಎದುರುದಾರರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಆಗಲೇ 1ನೇ ಎದುರುದಾರರಿಗೆ ಟಿಪ್ಪಣಿ ಹೊರಡಿಸಿರುತ್ತಾರೆ.

ದಿ.30.07.2015ರಂದು 1ನೇ ಎದುರುದಾರರು ನಿವೇಶನ ಸಂ.11 ಖಾತೆ 2051ರ ಕರ ನಿಧಾರಣಾ ಪಟ್ಟಿಯಿಂದ ಕೈಬಿಡಲು ಗ್ರಾಮ ಪಂಚಾಯಿತಿಗೆ ಆದೇಶ ನೀಡಲಾಗಿತ್ತು. ಆದರೆ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ತುಮಕೂರು ಅವರ ಆದೇಶದ ಮೇರೆಗೆ ದೂರುದಾರರ ನಿವೇಶನವನ್ನು ಯಥಾಸ್ಥಿತಿ ಕಾಪಾಡಲು ಸೂಚಿಸಿ ಜ್ಞಾಪನಪತ್ರ ಹೊರಡಿಸಿರುತ್ತಾರೆ. ದಿ.01.06.2007 ರಂದು 1ನೇ ಎದುರುದಾರರೇ ಇದೇ ನಿವೇಶನದ ಚೆಕ್ಕುಬಂದಿ ಗುರ್ತಿಸಿಕೊಡುವಂತೆ ಕಾರ್ಯದರ್ಶಿಗೆ ಮೆಮೋ ನೀಡಿರುತ್ತಾರೆ. ತೆರಿಗೆ ವಸೂಲಾತಿ ರಿಜಿಸ್ಟರಿನಲ್ಲಿ ದೂರುದಾರರ ಹೆಸರನ್ನು ಕಡಿಮೆ ಮಾಡಿದ ಬಗ್ಗೆ ದಾಖಲೆ ಲಭ್ಯವಿರುತ್ತದೆ.

ದೂರುದಾರರು ಇದೆ ವಿಷಯವಾಗಿ ದಾವೆ ಸಂ. 1010/2008 ದಾವೆ ಸಲ್ಲಿಸಿದ್ದು, ಅದರ ತೀರ್ಪಿನ ಪ್ರತಿ ಲಭ್ಯವಿರುವುದಿಲ್ಲ. ಆದರೆ ಈಗಾಗಲೇ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಆದೇಶದಂತೆ ದೂರುದಾರರಿಗೆ ನೀಡಿರುವ ಹಕ್ಕುಪತ್ರದ ಪ್ರಕಾರ ಚೆಕ್ ಬಂದಿ ಗುರ್ತಿಸಿ ಒತ್ತುವರಿ ತೆರವುಗೊಳಿಸಿವಂತೆ ಎದುರುದಾರರಿಗೆ ಆದೇಶಿಸಿರುವ ದಾಖಲೆ ಲಭ್ಯವಿರುತ್ತದೆ. ಆದರೆ ಎದುರುದಾರರು ಮೇಲಾಧಿಕಾರಿಗಳ ಆದೇಶದ ಪ್ರಕಾರ ಯಾವುದೇ ಕ್ರಮ ಜರುಗಿಸಿಲ್ಲದಿರುವುದು ಕಂಡುಬರುತ್ತದೆ.

1ನೇ ಎದುರುದಾರರು ದಿ.30.11.2012 ರಲ್ಲಿ ಸ್ವಯಂ ನಿವೃತ್ತಿ ಪಡೆದಿರುವುದರಿಂದ ಅವರನ್ನು ಪ್ರಕರಣದಿಂದ ಕೈಬಿಡಲಾಗಿದೆ. 2ನೇ ಎದುರುದಾರರು ದೂರುದಾರರಿಗೆ ನಿವೇಶನ ಗುರುತಿಸಿ ಒತ್ತುವರಿಯನ್ನು ತೆರವುಗೊಳಿಸಿಕೊಡಲು ವಿಫಲರಾಗಿರುವುದರಿಂದ ಅವರು ಕರ್ತವ್ಯಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀ ಜಗದೀಶ್, ಕಾರ್ಯದರ್ಶಿ, ಊರುಕೆರೆ, ಗ್ರಾಮಪಂಚಾಯತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರು ಸರ್ಕಾರಿ ನೌಕರರಾಗಿದ್ದು, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1) (i) ಮತ್ತು (ii) ರನ್ವಯ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14(ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/631/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 09-08-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಜಗದೀಶ್, ಕಾರ್ಯದರ್ಶಿ, ಊರುಕೆರೆ, ಗ್ರಾಮಪಂಚಾಯತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ 1 ರಿಂದ 58 ರವರೆಗಿನ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ತುಮಕೂರು, ತುಮಕೂರು ಜಿಲ್ಲೆ.
6. ಶ್ರೀ ಜಗದೀಶ್, ಕಾರ್ಯದರ್ಶಿ, ಊರುಕೆರೆ, ಗ್ರಾಮಪಂಚಾಯತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.